**All India Radio: Bangalore**
**Regional Bulletin in Kannada**
**10.12.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ವಿಧಾನಸಭೆಯಲ್ಲಿಂದು ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ನಿಯಂತ್ರಣ ವಿಧೇಯಕ ಮಂಡನೆ
2. ವಸತಿ ಯೋಜನೆಗಳಡಿ ಫಲಾನುಭವಿಗಳ ಸಹಾಯಧನ ಹೆಚ್ಚಿಸಲು ಸರ್ಕಾರ ಚಿಂತನೆ
3. ಆರ್‌ಟಿಒ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ - ಸಚಿವ ರಾಮಲಿಂಗಾರೆಡ್ಡಿ ಮೇಲ್ಮನೆಯಲ್ಲಿ ಸ್ಪಷ್ಟನೆ
4. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಗಳಿಗೆ ಅನುಮತಿ ವಿಚಾರ ; ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ - ಉಪಮುಖ್ಯಮಂತ್ರಿ ಭರವಸೆ

<><><><>

ವಿಧಾನಸಭೆಯಲ್ಲಿಂದು ಸಮಾಜದಲ್ಲಿ ಒಡಕು, ವೈಷಮ್ಯ, ಗಲಭೆ ಮೂಡಿಸಲು ಕಾರಣವಾಗುವ ದ್ವೇಷ-ಭಾಷಣಗಳಿಗೆ ಕಡಿವಾಣ ಹಾಕುವ ಕರ್ನಾಟಕ ದ್ವೇಷ-ಭಾಷಣ ಮತ್ತು ದ್ವೇಷ-ಅಪರಾಧಗಳು ತಡೆಗಟ್ಟುವಿಕೆ ಮತ್ತು ನಿಯಂತ್ರಣ ವಿಧೇಯಕ - ೨೦೨೫ ಅನ್ನು ಮಂಡಿಸಲಾಗಿದೆ. ಬಿಜೆಪಿ ನಾಯಕರ ವಿರೋಧದ ನಡುವೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಧೇಯಕ ಮಂಡಿಸಿದ್ದಾರೆ. ಸಭಾಧ್ಯಕ್ಷ ಯು.ಟಿ. ಖಾದರ್ ವಿಧೇಯಕವನ್ನು ಮತಕ್ಕೆ ಹಾಕಿದಾಗ ಬಿಜೆಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಸದನದಲ್ಲಿ ಈ ವಿಷಯ ಕುರಿತಂತೆ ಚರ್ಚಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಸಭಾಧ್ಯಕ್ಷರು ಸದನವನ್ನು ೧೦ ನಿಮಿಷಗಳ ಕಾಲ ಮುಂದೂಡಿದರು.

<><><><>

ವಿಧಾನಸಭೆಯಲ್ಲಿಂದು ತಾಂತ್ರಿಕ ದೋಷದ ಹಿನ್ನೆಲೆಯಲ್ಲಿ ವಿಧಾನಸಭಾಧ್ಯಕ್ಷರು ಸದನವನ್ನು ಕೆಲ ಹೊತ್ತು ಮುಂದೂಡಿದ ಪ್ರಸಂಗ ನಡೆಯಿತು. ವಿಧೇಯಕಗಳನ್ನು ಮಂಡಿಸುತ್ತಿರುವಾಗ ಮೈಕ್ ಇಲ್ಲದೆಯೇ ವಿವಿಧ ಇಲಾಖೆಯ ಸಂಬಂಧಪಟ್ಟ ಸಚಿವರು ಒಟ್ಟು ೧೨ ವಿಧೇಯಕಗಳನ್ನು ಮಂಡಿಸಿದ್ದಾರೆ. ಈ ವೇಳೆ ಸಭಾಧ್ಯಕ್ಷರ ವಿರುದ್ಧ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸದನವನ್ನು ಕೆಲಕಾಲ ಮುಂದೂಡಲಾಯಿತು.

<><><><>

ರಾಜ್ಯದಲ್ಲಿ ಬೆಳೆ ನಾಶದಿಂದ ಹಾನಿ ಅನುಭವಿಸಿದ ರೈತರಿಗೆ ೫ ಸಾವಿರದ ೫೩೪ ಕೋಟಿ ರೂಪಾಯಿ ಬೆಳೆ ವಿಮೆ ಪರಿಹಾರ ನೀಡಲಾಗಿದೆ ಎಂದು ಕೃಷಿ ಸಚಿವ ಚಲುವರಾಯ ಸ್ವಾಮಿ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿಂದು ಅಲ್ಲಮ ಪ್ರಭು ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಲಬುರಗಿ ಜಿಲ್ಲೆಯ ರೈತರಿಗೆ ೬೭೪ ಕೋಟಿ ರೂಪಾಯಿ ಬೆಳೆವಿಮೆ ಪರಿಹಾರ ನೀಡಲಾಗಿದೆ ಎಂದು ಹೇಳಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆರ್ಥಿಕ ಸಂಕಷ್ಟದಲ್ಲಿರುವ ೧೧ ಸಾವಿರದ ೧೫೪ ಮಂದಿ ಸಾಹಿತಿಗಳು ಹಾಗೂ ಕಲಾವಿದರಿಗೆ

ಮಾಸಿಕ ತಲಾ ೨ ಸಾವಿರದ ೫೦೦ ರೂಪಾಯಿ ಮಾಸಾಶನ ನೀಡಲಾಗುತ್ತದೆ ಎಂದು ಸಚಿವ ಶಿವರಾಜ್ ಎಸ್. ತಂಗಡಗಿ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

<><><>

ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳಿಗೆ ನೀಡುತ್ತಿರುವ ಸಹಾಯ ಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರ ಪ್ರಶ್ನೆಗಳಿಗೆ ಉತ್ತರ ನೀಡಿದ ಸಚಿವರು ಒಂದು ಮನೆ ನಿರ್ಮಾಣ ಮಾಡಲು ಕನಿಷ್ಠ ಏಳೆಂಟು ಲಕ್ಷ ರೂಪಾಯಿ ಅವಶ್ಯಕತೆ ಇರುತ್ತದೆ. ಈ ಹಿನ್ನೆಲೆಯಲ್ಲಿ ಸಹಾಯಧನದ ಮೊತ್ತವನ್ನು ೪ ರಿಂದ ೫ ಲಕ್ಷ ರೂಪಾಯಿಗೆ ಹೆಚ್ಚಳ ಮಾಡಬೇಕೆಂಬ ಚಿಂತನೆಯಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಗಳಿಗೆ ಪರಿವರ್ತಿಸುವ ಪ್ರಕ್ರಿಯೆಯನ್ನು ಸರಳೀಕರಣ ಮಾಡಲು ಕರ್ನಾಟಕ ಭೂಕಂದಾಯ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಮೇಲ್ಮನೆಯಲ್ಲಿ ತಿಳಿಸಿದ್ದಾರೆ.

<><><>

ರಾಜ್ಯದ ಆರ್‌ಟಿಓ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಮೇಲ್ಮನೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಇಂದು ಆಡಳಿತ ಪಕ್ಷದ ಸದಸ್ಯ ಐವಾನ್ ಡಿಸೋಜಾ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವ ರಾಮಲಿಂಗಾರೆಡ್ಡಿ, ಸಾರ್ವಜನಿಕರಿಗೆ ತೊಂದರೆಯಾಗುವಂತೆ ಮಧ್ಯವರ್ತಿಗಳ ಹಾವಳಿಗೆ ಅವಕಾಶ ನೀಡಿದರೆ ಆರ್. ಟಿ.ಓ ಕಚೇರಿಗಳ ಅಧಿಕಾರಿಗಳನ್ನೇ ಹೊಣೆಯಾಗಿಸಿ, ಶಿಸ್ತುಕ್ರಮಕ್ಕೆ ಗುರಿಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ಕೆಎಸ್‌ಸಿಎ ನೂತನ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಬೆಳಗಾವಿಯಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೂತನ ಅಧ್ಯಕ್ಷರಿಗೆ ಶುಭ ಕೋರಿದರು. ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಗಳ ಆಯೋಜನೆ ಕುರಿತು ನಾಳೆ ನಡೆಯಲಿರುವ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಕ್ರಿಕೆಟ್ ಪಂದ್ಯವನ್ನು ನಿಲ್ಲಿಸುವ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮೈಕೆಲ್ ಡಿ. ಕುನ್ಹಾ ಸಮಿತಿ ನೀಡಿರುವ ಸಲಹೆಗಳನ್ನು ಹಂತ ಹಂತವಾಗಿ ಪಾಲನೆ ಮಾಡಲಾಗುವುದು. ರಾಜ್ಯದ ಗೌರವ, ಸ್ವಾಭಿಮಾನಕ್ಕೆ ಯಾವುದೇ ಧಕ್ಕೆಯಾಗದ ರೀತಿಯಲ್ಲಿ ಕ್ರಿಕೆಟ್ ಅಭಿಮಾನಿಗಳ ಭಾವನೆಗಳಿಗೆ ಸ್ಪಂದಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ. ಐಪಿಎಲ್ ಸೇರಿದಂತೆ ಯಾವುದೇ ಪಂದ್ಯಗಳು ಬೆಂಗಳೂರಿನಿಂದ ಹೊರ ಹೋಗಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ನಿಜಲಿಂಗಪ್ಪ ಅವರು ಒಬ್ಬ ದಕ್ಷ, ರಾಜ್ಯ ಕಂಡ ಅಪರೂಪದ ರಾಜಕಾರಣಿಯಾಗಿದ್ದು ಕೊನೆಯವರೆಗೂ ಪ್ರಾಮಾಣಿಕವಾಗಿ ಜೀವಿಸಿದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ನಿಜಲಿಂಗಪ್ಪರವರ ಜನ್ಮ ದಿನದ ಅಂಗವಾಗಿ ಸುವರ್ಣಸೌಧದಲ್ಲಿರುವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಕರ್ನಾಟಕದ ಏಕೀಕರಣಕ್ಕೂ ಅವರು ಶ್ರಮಿಸಿದ್ದರು ಎಂದು ಹೇಳಿದ್ದಾರೆ. ಇದೇ ವೇಳೆ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಗೆ ಶಾಸಕರು ಮನವಿ ಮಾಡಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಗ್ಯಾರಂಟಿ ಯೋಜನೆಗಳ ಬಗ್ಗೆ ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಚರ್ಚೆಯೇ ಆಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ತೊಗರಿಬೇಳೆಗೆ ಕನಿಷ್ಠ ಬೆಂಬಲ ಬೆಲೆ ನೀಡುವಂತೆ ಒತ್ತಾಯಿಸಿ ಪ್ರಧಾನಿಯವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ.

**ಧ್ವನಿ : ಸಿದ್ದರಾಮಯ್ಯ**

<><><><>

ಸರ್ಕಾರ ಬೆಳಗಾವಿ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದು, ಬೆಳಗಾವಿ ನಗರಾಭಿವೃದ್ಧಿಗೆ ೧೦೦ ಕೋಟಿ ರೂಪಾಯಿಯನ್ನು ನಗರಾಭಿವೃದ್ಧಿ ಇಲಾಖೆಯಿಂದ ನೀಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ವಿಶ್ವಬ್ಯಾಂಕ್ ನೆರವಿನಡಿ ಜಲಸಂಗ್ರಹಗಾರ ಉದ್ಘಾಟಿಸಿ ಮಾತನಾಡಿದ ಅವರು, ರಸ್ತೆ ಹಾಗೂ ಚರಂಡಿಗಳ ಸುಧಾರಣೆಗೆ ಮುಖ್ಯಮಂತ್ರಿಗಳು ೧೦ ಕೋಟಿ ಅನುದಾನ ನೀಡಿದ್ದಾರೆ. ಕುಮಾಸ್ವಾಮಿ ಲೇಔಟ್ ಪ್ರದೇಶದಲ್ಲಿ ಆಧುನಿಕ ಚಿಕಿತ್ಸಾ ಸೌಕರ್ಯ ಒಳಗೊಂಡ ಆಸ್ಪತ್ರೆ ನಿರ್ಮಾಣಕ್ಕೆ ಇಲಾಖೆಯಿಂದ ೧೦ ಕೋಟಿ ಮಂಜೂರು ಮಾಡಲಾಗಿದೆ ಎಂದು ಹೇಳಿದ್ದಾರೆ.

<><><><>

ಬಾಗಲಕೋಟೆ ಜಿಲ್ಲೆಯಲ್ಲಿ ಆಯೋಜಿಸಲಿರುವ ಚಾಲುಕ್ಯ ಉತ್ಸವ-೨೦೨೫ರ ಪೂರ್ವಭಾವಿ ಸಿದ್ಧತಾ ಸಭೆ ಇಂದು ಬೆಳಗಾವಿಯ ಸುವರ್ಣ ಸೌಧದಲ್ಲಿ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ನೇತೃತ್ವದಲ್ಲಿ ನಡೆಯಿತು. ವಿಶ್ವಪರಂಪರೆ ಸ್ಥಳಗಳಾದ ಬಾದಾಮಿ, ಐಹೊಳೆ, ಪಟ್ಟದಕಲ್ಲಿನ ಚಾಲುಕ್ಯರ ಐತಿಹಾಸಿಕ ಪರಂಪರೆಯನ್ನು ಜಗತ್ತಿನಾದ್ಯಂತ ಪ್ರಚಾರ ಮಾಡುವ ಮತ್ತು ಉತ್ತರ ಕರ್ನಾಟಕದ ಪ್ರವಾಸೋದ್ಯಮಕ್ಕೆ ಹೊಸ ಚೈತನ್ಯ ತರುವ ಉದ್ದೇಶದಿಂದ ಈ ಬಾರಿ ಚಾಲುಕ್ಯ ಉತ್ಸವವನ್ನು ಅದ್ಧೂರಿಯಾಗಿ ಆಚರಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ತಿಮ್ಮಾಪೂರ ತಿಳಿಸಿದ್ದಾರೆ. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಸೇರಿದಂತೆ ಉತ್ತರ ಕರ್ನಾಟಕದ ಪ್ರಮುಖ ಶಾಸಕರು, ಗಣ್ಯರು ಉಪಸ್ಥಿತರಿದ್ದರು.

<><><><>

ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕಳೆದ ಸಾಲಿನಲ್ಲಿ ಕಡಿಮೆ ಫಲಿತಾಂಶ ದಾಖಲಾಗಿದ್ದ ಶಾಲೆಗಳಿಗೆ ಇಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಂದಿನಿ ಕೆ.ಆರ್. ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೃಷ್ಣರಾಜ ಪೇಟೆ ತಾಲ್ಲೂಕಿನ ಸಿಂಧಘಟ್ಟ ಗ್ರಾಮದ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಶಾಲೆಯಲ್ಲಿನ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದರು. ಕನ್ನಡ ಭಾಷೆಯ ಪಠ್ಯವನ್ನು ಸರಿಯಾಗಿ ಭೋದನೆ ಮಾಡುತ್ತಿಲ್ಲ ಎಂಬ ವಿಷಯವನ್ನು ವಿದ್ಯಾರ್ಥಿಗಳು ಗಮನಕ್ಕೆ ತಂದಿದ್ದಾರೆ. ಈ ಬಗ್ಗೆ ಒಂದು ವಾರದೊಳಗೆ ಸೂಕ್ತ ಕ್ರಮ ತೆಗೆದುಕೊಂಡು ವರದಿ ಸಲ್ಲಿಸಲು ಸೂಚಿಸಿದ್ದಾರೆ. ಸಿಂದಘಟ್ಟ

ಗ್ರಾಮದಲ್ಲಿನ ೩ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಮಕ್ಕಳ ಕಲಿಕೆಯ ವಿಧಾನ, ಪೌಷ್ಠಿಕ ಆಹಾರ ವಿತರಣೆ, ಮೂಲಭೂತ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದಿದ್ದಾರೆ.

<><><><>

ವಿಜಯನಗರ ಜಿಲ್ಲೆಯಾದ್ಯಂತ ಇದೇ ೧೮ ರಿಂದ ೧೪ ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಆಯೋಜಿಸಿದ್ದು, ಐದು ವರ್ಷದೊಳಗಿನ ಯಾವುದೇ ಮಗುವು ಲಸಿಕೆಯಿಂದ ವಂಚಿತವಾಗದಂತೆ ನಿಗಾ ವಹಿಸಬೇಕೆಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>